ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	1531
ಮಾನ್ಯ ಸದಸ್ಯರ ಹೆಸರು	ಶ್ರೀಮತಿ ಎಸ್. ವೀಣಾ ಅಚ್ಚಯ್ಯ
ಉತ್ತರಿಸಬೇಕಾದ ದಿನಾಂಕ	11.03.2022
ಉತ್ತರಿಸುವ ಸಚಿವರು	ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಕಡಿಮೆ ಜನಸಂಖ್ಯೆ: ಹೊಂದಿದ್ದರೂ, ವಿಶ್ವದಲ್ಲೇ ಅತ್ಯಂತ ವಿಶಿಷ್ಟ ಹಾಗೂ ವಿಭಿನ್ನವಾದ ಸಂಸ್ಕೃತಿ ಆಚಾರ-ವಿಚಾರ ಸಂಪ್ರದಾಯಗಳನ್ನು ಹೊಂದಿರುವ ಹಾಗೂ ದೇಶಸೇವೆ ಮತ್ತು ಕ್ರೀಡಾ ಕ್ಷೇತ್ರಕ್ಕೆ ಮಹತ್ತರ ಕೊಡುಗೆ ನೀಡಿರುವ ಕೊಡವ ಜನಾಂಗಕ್ಕೆ " ಸಂಬಂಧಿಸಿದ "ಕೊಡವರ ಅಭಿವೃದ್ಧಿ ನಿಗಮ" ಸ್ಥಾಪನೆ ಬಗ್ಗೆ ಸಾಕಷ್ಟು ಒತ್ತಾಯ ಹಲವಾರು ಬಾರಿ ಕೇಳಿ ಬಂದಿದ್ದರೂ, ಸದರಿ ನಿಗಮ ಸ್ಥಾಪನೆಗೆ ಸರ್ಕಾರ ಇದುವರೆಗೂ ಕ್ರಮವಹಿಸದೇ ಇರಲು ಕಾರಣವೇನು;	ಕೊಡವ ಸಮುದಾಯವನ್ನು ಒಳಗೊಂಡಂತೆ ಹಲವು ಹಿಂದುಳಿದ ವರ್ಗಗಳ ಸರ್ವತೋಮುಖ ಅಭಿವೃದ್ಧಿಗಾಗಿ ಈಗಾಗಲೇ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ವತಿಯಿಂದ ವಿವಿಧ ಯೋಜನೆಗಳನ್ನು ರೂಪಿಸಿ ಅನುಷ್ಠಾನ ಗೊಳಿಸಲಾಗುತ್ತಿರುವುದರಿಂದ ಪ್ರತ್ಯೇಕ ಕೊಡವರ ಅಭಿವೃದ್ಧಿ ನಿಗಮವನ್ನು ಸ್ಥಾಪನೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.
ಆ)	"ಕೊಡವರ ಅಭಿವೃದ್ಧಿ ನಿಗಮವನ್ನು ಸ್ಥಾಪಿಸುವ ಕುರಿತು ಸರ್ಕಾರ 2022-23ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾಗುವುದೇ;	2022-23ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಕೊಡವ ಅಭಿವೃದ್ಧಿ ನಿಗಮದ ಸ್ಥಾಪನೆಯ ಬಗ್ಗೆ ಯಾವುದೇ ಘೋಷಣೆ ಇರುವುದಿಲ್ಲ. ಆದರೆ ಆಯವ್ಯಯ ಭಾಷಣದ ಕಂಡಿಕೆ-173ರಲ್ಲಿ ಕೊಡವ ಜನಾಂಗದ ಶ್ರೇಯೋಭಿವೃದ್ಧಿಗಾಗಿ ರೂ.10 ಕೋಟಿ ಮೊತ್ತದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಳ್ಳಲಾಗುವುದೆಂದು ಘೋಷಿಸಲಾಗಿ ರುತ್ತದೆ.
ಇ)	"ಕೊಡವ ಅಭಿವೃದ್ಧಿ ನಿಗಮ"ವನ್ನು ಸ್ಥಾಪಿಸುವ ಕುರಿತು ಸರ್ಕಾರ 2022-23ನೇ ಸಾಲಿನ ಆಯವ್ಯಯದಲ್ಲಿ ಘೋಷಿಸುವ ಮೂಲಕ ಕೊಡವ ಜನಾಂಗದ ಅಭಿವೃದ್ಧಿಗೆ ಸರ್ಕಾರ ಕೂಡಲೇ ಕ್ರಮವಹಿಸವುದೇ?	

ಸಂಖ್ಯೆ: ಹಿಂವಕ 49 ಬಿಸಿಎ 2022

(ಕೋಟಾ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು